## **ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ**

## **SC No. 59/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ಬೋಪಯ್ಯ ಕೆ.ಕೆ** | **PW - 3** |
| ತಂದೆಯ ಹೆಸರು | : | **ಕರುಂಬಯ್ಯ** | **CW - 5** |
| ವಯಸ್ಸು | : | **74 ವರ್ಷ** | |
| ವೃತ್ತಿ | : | **ವ್ಯವಸಾಯ** | |
| ವಾಸ | : | **ಕಡಗದಾಳು ಗ್ರಾಮ, ಮಡಿಕೇರಿ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 17-02-2025 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**<u>ಮುಖ್ಯವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ</u>**

1. ನಾನು ಕಡಗದಾಳು ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದ ನಿರ್ದೇಶಕನಾಗಿ 2019 ನೇ ಸಾಲಿನಲ್ಲಿ ಕೆಲಸ ಮಾಡಿರುತ್ತೇನೆ. ಚಾಸಾ-1 ಲೋಕೇಶ್ ಇವರು ಆ ಸಮಯದಲ್ಲಿ ಸದರಿ ಕೃಷಿ ಪತ್ತಿನ ಸಹಕಾರ ಸಂಘದ ಕಾರ್ಯದರ್ಶಿ ಆಗಿದ್ದರು, ಪ್ರಾಸಾ-1 ಇವರು ಸದರಿ ಕೃಷಿ ಪತ್ತಿನ ಸಹಕಾರ ಸಂಘದ ಗುಮಾಸ್ತರಾಗಿದ್ದರು. ಆರೋಪಿ ಗಣಪತಿ ನಮ್ಮ ಊರಿನವರು ಇರುತ್ತಾರೆ. 3 ವರ್ಷದ ಹಿಂದೆ ಪೊಲೀಸರು ಕಡಗದಾಳು ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಬಂದು ಪಂಚನಾಮೆ ಮಾಡಿ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಪಂಚನಾಮೆಯನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರ ಮೇಲಿರುವ ಸಾಕ್ಷಿ ಸಹಿಯನ್ನು **ನಿಪಿ-1(ಬಿ)** ಎಂದು ಗುರುತಿಸಲಾಯಿತು. ಪಂಚನಾಮೆಯಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಯಾವ ಕಾರಣಕ್ಕೆ ಪಂಚನಾಮೆ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಟೋವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದೆ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**<u>ಪಾಟೀಸವಾಲು- ಸರ್ಕಾರಿ ಅಭಿಯೋಜಕರಿಂದಃ</u>**

1. ದಿನಾಂಕ 12.11.2019 ರಂದು ಪೊಲೀಸರು ಕೃಷಿ ಪತ್ತಿನ ಸಹಕಾರ ಸಂಘ ಕಡಗದಾಳು ಗ್ರಾಮಕ್ಕೆ ಬಂದು ಆರೋಪಿತನು ಚಾಸಾ-1 ರವರಿಗೆ ಹಲ್ಲೆ ಮಾಡಿದ್ದ ವಿಚಾರದಲ್ಲಿ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಚಾಸಾ-2 ರವರು ಸ್ಥಳ ತೋರಿಸಿದರ ಮೇರೆಗೆ ಪೊಲೀಸರು ನಿಪಿ-1 ರಂತೆ ಪಂಚನಾಮೆ ಮಾಡಿದರು ಎಂದು ಸೂಚಿಸುವುದು ಸರಿಯಲ್ಲ. ಪಂಚನಾಮೆಯನ್ನು ನಾನು ಓದಿ ನೋಡಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀಸವಾಲು- ಆರೋಪಿ ಪರ ವಕೀಲರಾದ ಶ್ರೀ ಬಿ.ಡಿ.ಕೆ. ರವರಿಂದಃ</u>**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**<u>ಮರುವಿಚಾರಣೆಃ</u>** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/-
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಕೊಡಗು-ಮಡಿಕೇರಿ.